೬೬ ಕೆ.ವಿ. ಸಬ್ ಸ್ಟೇಷನ್

1787 (935); ಶ್ರೀ ಬಾಲಕೃಷ್ಣ ಹೆಚ್. ಸಿ. (ಮಾಗಡಿ)

ಅ) ಮಾಗಡಿ ಕ್ಷೇತ್ರ ವ್ಯಾಪ್ತಿಯಲ್ಲಿ ಹೊಸದಾಗಿ 66 ಕೆ.ವಿ. ಸಬ್‌ಸ್ಟೇಷನ್‌ಗಳನ್ನು ಪ್ರಾರಂಭಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;

ಆ) ಹಾಗಾದರೆ ಯಾವ್ಯಾವ ಗ್ರಾಮಗಳಿಗೆ ಮಂಜೂರು ಮಾಡಲಾಗಿದೆ;

ಇ) ಯಾವ ಕಾಲಮಿತಿಯಲ್ಲಿ ಸ್ಥಾಪಿಸಲಾಗುವುದು?

ಶ್ರೀ ಡಿ.ಕೆ. ಶಿವಕುಮಾರ್ (ಇಂಧನ ಸಚಿವರು)

ಅ), ಆ) ಮತ್ತು ಇ) ಹೌದು, ಮಾಗಡಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ (1) ಹೊಸಪಾಳ್ಯ ಸರ್ಕಲ್, (2) ಮತ್ತಿಕೆರೆ ಮತ್ತು (3) ಶ್ರೀಗಿರಿಪುರ ಈ ಮೂರು ಸ್ಥಳಗಳಲ್ಲಿ 66/11 ಕೆ.ವಿ. ವಿದ್ಯುತ್ ಉಪಕೇಂದ್ರಗಳನ್ನು ಸ್ಥಾಪಿಸುವ ಪ್ರಸ್ತಾವನೆಗಳು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ಮುಂದೆ ಇದ್ದು, ತಾಂತ್ರಿಕ ಸಾಧ್ಯತೆಗಳನ್ನು ಪರಿಶೀಲಿಸಲಾಗುತ್ತಿದೆ.

ಕೆ.ಸಿ.ಸಿ. ಬ್ಯಾಂಕ್ ಲಿ., ಧಾರವಾಡದ ಬಗ್ಗೆ

1788 (2080); ಶ್ರೀ ಬಾಲಕೃಷ್ಣ ಹೆಚ್. ಸಿ. (ಮಾಗಡಿ)

ಅ) ಮೆ: ವರದಾ ಶುಗರ್ಸ್ ಡಂಬರಮತ್ತೂರು ಇವರಿಗೆ ಕೆ.ಸಿ.ಸಿ. ಬ್ಯಾಂಕ್ ಲಿ., ಧಾರವಾಡ ವತಿಯಿಂದ ಸಾಲ ಮಂಜೂರು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಾದರೆ, ಯಾವಾಗ ಮತ್ತು ಎಷ್ಟು ಸಾಲವನ್ನು ನೀಡಲಾಗಿದೆ; ಈಗ ಸಂಸ್ಥೆಯಿಂದ ಸುಸ್ತಿಯಾಗಿರುವ ಮೊತ್ತವೆಷ್ಟು;